**APPLICATION FOR THE POST OF VILLAGE ACCOUNTANT CHITRADURGA**

**(Application form to be filled on A4 White Paper on Single Sheet with Black ink Ball Pen only)**

***(Tick appropriate Circle Only)***

| | | |
|---|---|---|
| 1 A | Application Number (for office use) | Affix your latest Colour Stamp size Photograph |
| 2 | Full Name / ಅಭ್ಯರ್ಥಿಯ ಪೂರ್ಣ ಹೆಸರು (as in SSLC/10th Certificate) | |
| 3 | Mother's Name/ ತಾಯಿಯ ಹೆಸರು | |
| 4 | Father's/Husband's Name/ ತಂದೆಯ/ಗಂಡನ ಹೆಸರು | |
| 5 | Sex/ಲಿಂಗ | Male/ಪುರುಷ ◯ Female/ಮಹಿಳೆ ◯ |
| 6 | Date of Birth/ಜನ್ಮ ದಿನಾಂಕ (as per SSLC Marks Card) | D D M M Y Y Y Y |
| 7 | Applied Category/ ಕೋರಿರುವ ವರ್ಗ (attach proof) | ◯ GM/ ಸಾ.ಅ. ◯ SC/ ಪ.ಜಾ. ◯ ST/ ಪ.ಪಂ. ◯ Cat-I/ ಪ್ರವರ್ಗ–1<br>◯ IIA/ 2ಎ ◯ IIB/ 2ಬಿ ◯ IIIA/ 3ಎ ◯ IIIB/ 3ಬಿ |
| 8 | Do you come under these groups?/ ನೀವು ಈ ಗುಂಪುಗಳಲ್ಲಿ ಬರುವಿರಾ? (attach proof) | ◯ Rural/ ಗ್ರಾಮೀಣ ◯ KMS/ಕನ್ನಡ ಮಾಧ್ಯಮ ಅಭ್ಯರ್ಥಿ<br>◯ PDP/ಯೋಜನಾ ನಿರಾಶ್ರಿತ ಅಭ್ಯರ್ಥಿ ◯ Ex-Serviceman/ಮಾಜಿ ಸೈನಿಕ<br>◯ PHC/ಅಂಗವಿಕಲ |
| 8 A | Description of PHC/ಅಂಗವಿಕಲತೆಯ ವಿವರ | ◯ Leprosy Cured ◯ Hearing Impaired ◯ Mentally ill |
| 9 | Are you in Govt. Service?/ ಸರ್ಕಾರಿ ಸೇವೆಯಲ್ಲಿರುವಿರಾ? | ◯ Yes/ಹೌದು ◯ No/ಇಲ್ಲ |
| 10 | Do you claim age relaxation? If yes, select accordingly / ನೀವು ವಯೋಮಿತಿ ರಿಯಾಯಿತಿ ಕೋರುವಿರಾ? | ◯ Widow/ ವಿಧವೆ ◯ Ex-Serviceman/ ಮಾಜಿಸೈನಿಕ ◯ PHC/ಅಂಗವಿಕಲ |
| 11 | Qualifying Exam Passed?/ ನೀವು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದೀರಾ? | ◯ PUC 2nd/ ದ್ವಿತೀಯ ಪಿಯುಸಿ ◯ CBSE 12th/ ಸಿಬಿಎಸ್‌ಇ 12ನೇ ◯ ICSE 12th/ ಐಸಿಎಸ್‌ಇ 12ನೇ |
| 12 | Total Marks Obtained in 2nd PUC/CBSE 12th /ICSE 12th/ದ್ವಿತೀಯ ಪಿಯುಸಿ/ಸಿಬಿಎಸ್‌ಇ 12ನೇ ತರಗತಿ/ಐಸಿಎಸ್‌ಇ 12ನೇ ತರಗತಿಯಲ್ಲಿ ಗಳಿಸಿದ ಒಟ್ಟು ಅಂಕಗಳು | |
| 13 | Maximum Marks in 2nd PUC/CBSE 12th /ICSE 12th/ ದ್ವಿತೀಯ ಪಿಯುಸಿ/ಸಿಬಿಎಸ್‌ಇ 12ನೇ ತರಗತಿ/ಐಸಿಎಸ್‌ಇ 12ನೇ ತರಗತಿಯಲ್ಲಿ ಗರಿಷ್ಠ ಅಂಕಗಳು | |
| 14 | Address for communication/ಪೂರ್ಣ ವಿಳಾಸ<br>District/ಜಿಲ್ಲೆ<br>PIN/ ಪಿನ್ | 15 Email Address (if any) ಇ–ಮೇಲ್ ವಿಳಾಸ(ಇದ್ದಲ್ಲಿ)<br>16 Phone No: (if any) ದೂರವಾಣಿ ಸಂಖ್ಯೆ<br>17 Mobile No: (if any) ಮೊಬೈಲ್ ನಂ |
| 18 | Bank Name | |
| 19 | DD No | 20 DD Date · 21 Amount |

The above information is correct to the best of my best knowledge/ ಮೇಲ್ಕಂಡ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ.

**Signature of the Applicant/ಅಭ್ಯರ್ಥಿಯ ಸಹಿ**

**ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ,**

**ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.**

ಸಂ:ಗ್ರಾಲೆ:ಸಿಬ್ಬಂದಿ:ಸಿಆರ್–40/2009–10 ದಿನಾಂಕ:19–1–2012

**::ಅಧಿಸೂಚನೆ::**

**ವಿಷಯ:** ಚಿತ್ರದುರ್ಗ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಅಧಿಸೂಚನೆ ಸಂ:ಆರ್‌ಡಿ–299:ಬಿಎಸ್‌ಸಿ–2006 ದಿನಾಂಕ:3–2–2009.
2) ಸರ್ಕಾರದ ಪತ್ರ ಸಂ:ಕಂಇ–4:ಬಿಎಸ್‌ಸಿ–2011 ದಿನಾಂಕ:25–2–2011.
3) ಈ ಪ್ರಾಧಿಕಾರದ ಸಮಸಂಖ್ಯೆ ಅಧಿಸೂಚನೆ ದಿ:19–1–12.

%%%%%%

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಬರುವ ತಾಲ್ಲೂಕುಗಳಲ್ಲಿ 2009ನೇ ಸಾಲಿನಲ್ಲಿ 60 ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿತ್ತು. ಸದರಿ ಹುದ್ದೆಗಳಲ್ಲಿ 10 ಹುದ್ದೆಗಳು ಖಾಲಿ ಉಳಿದಿರುತ್ತವೆ. ಆ ನಂತರ ವಯೋ ನಿವೃತ್ತಿ, ರಾಜೀನಾಮೆ, ಮುಂಬಡ್ತಿ, ವರ್ಗಾವಣೆ ಇನ್ನಿತರೆ ಕಾರಣಗಳಿಂದಾಗಿ 30 ಹುದ್ದೆಗಳು ತೆರವಾಗಿವೆ. ಆದುದರಿಂದ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರಿಕ್ರ್ಯೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂ:ಕಂಇ–4:ಬಿಎಸ್‌ಸಿ–2011 ದಿನಾಂಕ:25–2–2011ರಲ್ಲಿ ಅನುಮೋದನೆ ನೀಡಿದೆ. ಅದರಂತೆ ಒಟ್ಟು 40 ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ ಇವರಿಗೆ ದಿ:17–2–2012ರ ಸಂಜೆ 5–00 ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೋರಿಯರ್ ಮೂಲಕ ಕಳುಹಿಸುವುದು. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ.

**ಹುದ್ದೆಗಳ ವಿವರ:**

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮಲೆಕ್ಕಾಧಿಕಾರಿ | 40 | ಪಿ.ಯು.ಸಿ. ಅಥವಾ (ಸಿಬಿಎಸ್‌ಇ/ಐಸಿಎಸ್‌ಇ) 12ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. | 5800–100:6000–125:6500–150: 7100–175:7800–200:8600–225:9500–250: 10500 |

**ಮೀಸಲಾತಿ ವರ್ಗೀಕರಣ:**

**2009–10ನೇ ಸಾಲಿನಲ್ಲಿ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಖಾಲಿ ಹುದ್ದೆಗಳು**

| ಕ್ರ. ಸಂ: | ಮೀಸಲಾತಿ | ಸಾಮಾನ್ಯ | ಮಹಿಳೆ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| **1** | **2** | **3** | **4** | **5** | **6** | **7** | **8** | **9** | **10** |
| 1 | ಸಾಮಾನ್ಯ | – | – | – | – | 1 | – | – | 1 |
| 2 | ಪ.ಜಾತಿ | 1 | 1 | – | – | – | – | – | 2 |
| 3 | ಪ.ಪಂ | 1 | – | – | – | – | – | – | 1 |
| 4 | ಪ್ರ.ವ–1 | 1 | – | – | – | – | – | – | 1 |
| 5 | ಪ್ರವ–2(ಎ) | 2 | 1 | – | – | – | – | – | 3 |
| 6 | ಪ್ರವ–2(ಬಿ) | – | – | – | – | – | – | – | – |
| 7 | ಪ್ರವ–3(ಎ) | – | – | – | – | – | – | – | – |
| 8 | ಪ್ರವ–3(ಬಿ) | 1 | – | 1 | – | – | – | – | 2 |
| | **ಒಟ್ಟು** | **6** | **2** | **1** | **–** | **1** | **–** | **–** | **10** |

2011–12ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣ

| ಕ್ರ. ಸಂ: | ಮೀಸಲಾತಿ | ಶೇಕಡ ಪ್ರಮಾಣ ಮೀಸಲಾತಿ | ಸಾಮಾನ್ಯ | ಮಹಿಳೆ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|---|
| **1** | **2** | **3** | **4** | **5** | **6** | **7** | **8** | **9** | **10** | **11** |
| 1 | ಸಾಮಾನ್ಯ | 50 | 3 | 5 | 3 | 1 | 1 | 1 | 1 | **15** |
| 2 | ಪ.ಜಾತಿ | 15 | 1 | 1 | 1 | – | – | 1 | – | **4** |
| 3 | ಪ.ಪಂ | 3 | – | – | 1 | – | – | – | – | **1** |
| 4 | ಪ್ರ.ವ–1 | 4 | – | – | – | 1 | – | – | – | **1** |
| 5 | ಪ್ರವ–2(ಎ) | 15 | 1 | 1 | 1 | – | 1 | – | – | **4** |
| 6 | ಪ್ರವ–2(ಬಿ) | 4 | – | – | 1 | 1 | – | – | – | **2** |
| 7 | ಪ್ರವ–3(ಎ) | 4 | – | – | 1 | – | – | – | – | **1** |
| 8 | ಪ್ರವ–3(ಬಿ) | 5 | – | – | 1 | 1 | – | – | – | **2** |
| | **ಒಟ್ಟು** | **100** | **5** | **7** | **9** | **4** | **2** | **2** | **1** | **30** |

**ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:**

1) ಅರ್ಜಿಗಳನ್ನು ಅಂಚೆ ಅಥವಾ ಕೋರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2) **ವಯೋಮಿತಿ:** ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | |
|---|---|
| ಸಾಮಾನ್ಯ ವರ್ಗ | ಕನಿಷ್ಠ 18 ಗರಿಷ್ಠ 35 ವರ್ಷ |
| 2ಎ, 2ಬಿ. 3ಎ, 3ಬಿ | ಕನಿಷ್ಠ 18 ಗರಿಷ್ಠ 38 ವರ್ಷ |
| ಪ.ಜಾತಿ/ಪ.ಪಂಗಡ ಪ್ರ–1 | ಕನಿಷ್ಠ 18 ಗರಿಷ್ಠ 40 ವರ್ಷ |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4) ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್‌ಸೈಟ್ http://chitradurga.nic.in ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು, ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ನಮೂದಿಸಿರಬೇಕು.
5) ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
6) ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ/ ಇಲಾಖಾ ಮುಖ್ಯಸ್ಥರ ಮುಖಾಂತರ ಸಲ್ಲಿಸುವುದು.
7) ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
8) ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
9) ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
10) ಜಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

11) ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಚಿತ್ರದುರ್ಗರವರು ಕಾಯ್ದಿರಿಸಿಕೊಂಡಿರುತ್ತಾರೆ.
12) **ಅರ್ಜಿ ಶುಲ್ಕದ ವಿವರ:** ಪ.ಜಾತಿ/ಪ. ಪಂಗಡ, ಪ್ರವರ್ಗ–1 ಅಭ್ಯರ್ಥಿಗಳು ರೂ.50–00 ಹಾಗೂ ಇತರರಿಗೆ ರೂ.100–00 ಗಳ ಡಿ.ಡಿ.ಯನ್ನು ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಇವರ ಹೆಸರಿಗೆ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಮಾತ್ರ ಪಡೆದು, ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಾಗೂ ಡಿ.ಡಿ. ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ.ಡಿ.ಯನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
13) ಸಹಿ ಮಾಡದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
14) ಆಯ್ಕೆಯನ್ನು ಅಭ್ಯರ್ಥಿಯ **ಮೆರಿಟ್ ಆಧಾರದ** ಮೇಲೆ ಮಾತ್ರ ಪರಿಗಣಿಸಲಾಗುವುದು.
15) ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯು ಜವಾಬ್ದಾರರಾಗುವುದಿಲ್ಲ.
**16) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆ ಅಡಿಯಲ್ಲಿ ಪರಿಗಣಿಸಲಾಗುವುದು.

| | |
|---|---|
| **ಪ.ಜಾತಿ/ಪ. ಪಂಗಡ, ಪ್ರವರ್ಗ–1** | ಸರ್ಕಾರದ ಅಧಿಸೂಚನೆ ಸಂ:SWD 132 SAD 97 ದಿ:8–2–2000 ಕ್ರಮವಾಗಿ ನಮೂನೆ–1 ಮತ್ತು 2 |
| **ಪ್ರವರ್ಗ–2ಎ, 2ಬಿ, 3ಎ, 3ಬಿ** | ಸರ್ಕಾರದ ಅಧಿಸೂಚನೆ ಸಂ:SWD 126 BCA ದಿ:13–2–2003 (ಕರ್ನಾಟಕ ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ ನೇಮಕಾತಿ ಮುಂತಾದ ಮೀಸಲಾತಿ ತಿದ್ದುಪಡಿ) ನಿಯಮಗಳು 2000ರನ್ವಯ ನಮೂನೆ–3 |

ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.

**17) ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಸರ್ಕಾರಿ ಆದೇಶ ಸಂ:ಸಿಆಸುಇ–71:ಸೇನೇನಿ–2001 ದಿ:24–10–2002ರನ್ವಯ ಶೇಕಡ 5ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿಡಲಾಗಿದೆ. ಈ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರು ನೀಡಿದ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು.

**18) ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು

**19) ಅಂಗವಿಕಲ ಅಭ್ಯರ್ಥಿಗಳು:**

ಅಂಗವಿಕಲ ಅಭ್ಯರ್ಥಿ ಎಂದರೆ ಸರ್ಕಾರದ ಆದೇಶ ಸಂ:ಡಿಪಿಎಆರ್–52:ಎಸ್‌ಆರ್‌ಆರ್ 99 ದಿ:29–11–2002ರಂತೆ

ಎ) ಕುಷ್ಠರೋಗ ನಿವಾರಿತರು

ಬಿ) ಶ್ರವಣ ದೋಷ ಉಳ್ಳವರು ಅಂದರೆ 70 ಡಿಸಿಬಲ್ಸ್ ಮತ್ತು ಅದಕ್ಕಿಂತ ಹೆಚ್ಚು

ಸಿ) ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾಗಿರುವವರು

ಡಿ)ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಆಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

ಇ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

**20) ಗ್ರಾಮೀಣ ಅಭ್ಯರ್ಥಿಗಳು:**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಡೀಕೃತ ಗ್ರಾಮೀಣ ಪತ್ರವನ್ನು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅಜಿಯೊಂದಿಗೆ ಲಗತ್ತಿಸತಕ್ಕದ್ದು.

**21) ಕನ್ನಡ ಮಾಧ್ಯಮ ಅಭ್ಯರ್ಥಿಗಳು:**

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 71 ಎಸ್‌ಆರ್‌ಆರ್ 2001. ದಿ:24–10–02 ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು

1977 ರ ನಿಯಮ (9) (1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಧ್ಯಾಯರ ಸಹಿ ಹಾಗೂ ಮೊಹರು ಮತ್ತು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

**22) ಅರ್ಹತಾ ಷರತ್ತುಗಳು:**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು.ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**23) ಈ ಕೆಳಕಂಡ ದಾಖಲೆಗಳನ್ನು ನಿಗದಿತ ನಮೂನೆಯ ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂಬುದಾಗಿ ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳುವುದು**

* ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರ/ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ

* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Commulative Record)

* ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಯ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)

* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

**ಮೇಲ್ಕಂಡಂತೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**24) <u>ಇತರೆ ಸೂಚನೆಗಳು:</u>**

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ (ಜೆರಾಕ್ಸ್) ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

3) ಅಪೂರ್ಣ ಮಾಹಿತಿ ಇರುವ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.

**(ವಿಪುಲ್ ಬನ್ಸಲ್)**
**ಜಿಲ್ಲಾಧಿಕಾರಿಗಳು,**
**ಚಿತ್ರದುರ್ಗ ಜಿಲ್ಲೆ.**

ಸಿ.